ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಶ್ರಮಿಕ ವರ್ಗದವರಿಗೆ ಸಹಾಯ ಧನ ನೀಡುವ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

801 (848) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-19 ಸಾಂಕ್ರಮಿಕ ರೋಗ ಹರಡಿ, ಲಾಕ್‌ಡೌನ್ ಘೋಷಣೆಗೊಂಡ ಸಮಯದಲ್ಲಿ ಟ್ಯಾಕ್ಸಿ ಚಾಲಕರು, ಆಟೋ ಚಾಲಕರು, ಕ್ಷೌರಿಕರು ಹಾಗೂ ಇನ್ನು ಮುಂತಾದ ಶ್ರಮಿಕ ವರ್ಗದವರಿಗೆ ರಾಜ್ಯ ಸರ್ಕಾರದಿಂದ ಸಹಾಯಧನ ಘೋಷಣೆಯಾಗಿದ್ದು ಆ ಪ್ರಕಾರ ಗದಗ, ಧಾರವಾಡ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಟ್ಯಾಕ್ಸಿ ಚಾಲಕರು, ಆಟೋ ಚಾಲಕರು, ಕ್ಷೌರಿಕರು ಹಾಗೂ ಇನ್ನುಳಿದ ಘೋಷಿತ ಶ್ರಮಿಕ ವರ್ಗದವರು ನೋಂದಾಯಿತರಾಗಿದ್ದಾರೆ ;

(ಆ) ಸದರಿ ಘೋಷಣೆಯ ಪ್ರಕಾರ ಗದಗ, ಧಾರವಾಡ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಟ್ಯಾಕ್ಸಿ ಚಾಲಕರು, ಆಟೋ ಚಾಲಕರು, ಕ್ಷೌರಿಕರು ಹಾಗೂ ಇನ್ನುಳಿದ ಘೋಷಿತ ಶ್ರಮಿಕ ವರ್ಗದವರಿಗೆ ಸಹಾಯಧನವನ್ನು ನೀಡಲಾಗಿದೆ ; ಎಷ್ಟು ಬಾಕಿ ಇದೆ ; (ವಿವರ ನೀಡುವುದು)

(ಇ) ಬಾಕಿ ಉಳಿಯಲು ಕಾರಣಗಳೇನು ;

(ಈ) ಎಲ್ಲಾ ನೋಂದಾಯಿತ ಟ್ಯಾಕ್ಸಿ ಚಾಲಕರು, ಆಟೋ ಚಾಲಕರು, ಕ್ಷೌರಿಕರು ಹಾಗೂ ಇನ್ನುಳಿದಘೋಷಿತ ಶ್ರಮಿಕ ವರ್ಗದವರಿಗೆ ಸಹಾಯಧನವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು?